ಅ) ಬೈಂದೂರು ವಿಧಾನ ಸಭಾ ಕ್ಷೇತ್ರದಲ್ಲಿ ರಾಜೀವ್ ಗಾಂಧಿ ವಸತಿ ಯೋಜನೆಯಲ್ಲಿ 172 ಉಪ ಗ್ರಾಮಗಳಿಗೆ ವಿದ್ಯುತ್ ಸಂಪರ್ಕ ನೀಡದೇ ಇರುವುದರಿಂದ ಇಲ್ಲಿನ ಜನತೆಗೆ ತೊಂದರೆಯಾಗಿದ್ದು, ವಿದ್ಯುತ್ ಸಂಪರ್ಕ ಯಾವಾಗ ಕಲ್ಪಿಸಲಾಗುವುದು;

ಆ) ಬೈಂದೂರು ವಿಧಾನ ಸಭಾ ಕ್ಷೇತ್ರದ ನಾವುಂದದ ಕೋಯಾ ನಗರದಲ್ಲಿ 110 ಕೆ.ವಿ. ವಿದ್ಯುತ್ ಸ್ಥಾವರ ನಿರ್ಮಾಣ ಮಾಡಲು ಸರ್ಕಾರದಿಂದ ಮಂಜೂರಾತಿಯಾಗಿದ್ದು. ಇದು ಯಾವ ಹಂತದಲ್ಲಿರುತ್ತದೆ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಬೈಂದೂರು ವಿಧಾನಸಭಾ ಕ್ಷೇತ್ರದಲ್ಲಿ ಮತ್ತು 170 ಉಪ ಗ್ರಾಮಗಳ ವಿದ್ಯುದೀಕರಣಕ್ಕಾಗಿ ಎರಡು ಹಂತದಲ್ಲಿ ಯೋಜನೆ ತಯಾರಿಸಲಾಗಿತ್ತು. ಅದರಲ್ಲಿ 8 ಉಪ ಗ್ರಾಮಗಳ ವಿದ್ಯುದೀಕರಣ ಕೆಲಸವು ಈಗಾಗಲೇ ಮುಗಿದಿರುತ್ತದೆ. ಉಳಿದ 170 ಉಪ ಗ್ರಾಮಗಳ ವಿದ್ಯುದೀಕರಣವನ್ನು 2005–06ನೇ ಆರ್ಥಿಕ ವರ್ಷದಲ್ಲಿ ಕೈಗೆತ್ತಿಕೊಳ್ಳಲಾಗುವುದು.

ಆ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ಪರ್ಸ್ಪೆಕ್ಟಿವ್ ಪ್ಲಾನ್ 2006–07ರಂತೆ ನಾವುಂದದಲ್ಲಿ 30 ಎಂ.ವಿ.ಎ. ಸಾಮರ್ಥ್ಯದ 11–/33/11 ಕೆ.ವಿ. ಕೇಂದ್ರದ ಪ್ರಸ್ತಾವನೆಯಿರುತ್ತದೆ. ಇದರ ಬಗ್ಗೆ ಅಗತ್ಯ ವಿವರಗಳ ಸಂಗ್ರಹಣಾ ಕಾರ್ಯ ನಡೆದಿದ್ದು, ಪ್ರಸ್ತಾವನೆಯನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ತಾಂತ್ರಿಕ ಸಲಹಾ ಸಮಿತಿಯ ಮುಂದೆ ಮಂಡಿಸಿ, ತಾಂತ್ರಿಕ ಸಲಹಾ ಸಮಿತಿಯ ಸಲಹೆಗಳ ಪ್ರಕಾರ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

731(547) ಶ್ರೀ ಗೋಪಾಲ್ ಪೂಜಾರಿ ಕೆ.(ಬೈಂದೂರು) : ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಯಲ್ಲಿ ಅಧಿಕ ಭಾರದ ಮ್ಯಾಂಗನೀಸ್ ಅದಿರು ತುಂಬಿದ ಲಾರಿಗಳ ಓಡಾಟದಿಂದ ರಸ್ತೆ ಹಾಗೂ ಸೇತುವೆಗಳಿಗೆ ತೀವ್ರ ಹಾನಿಯಾಗುವುದೆಂದು ಸಾರ್ವಜನಿಕರು ರಸ್ತೆ ತಡೆಯಂತಹ ಚಳುವಳಿ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಬಂದಿರುತ್ತದೆ.

ಆ) ಲೋಕೋಪಯೋಗಿ ಇಲಾಖೆ ವ್ಯಾಪ್ತಿಯಲ್ಲಿರುವ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ನಿಗದಿತ ತೂಕಕ್ಕಿಂತ ಹೆಚ್ಚಿನ ಭಾರ ಹೊತ್ತ ವಾಹನಗಳ ಸಂಚಾರವನ್ನು ನಿಷೇಧಿಸುವ ಬಗ್ಗೆ ಉಡುಪಿ ಜಿಲ್ಲೆಯ ಜಿಲ್ಲಾಧಿಕಾರಿಗಳು ಅಧಿಸೂಚನೆಯನ್ನು ಹೊರಡಿಸಿರುತ್ತಾರೆ. ಇದರನುಸಾರ ಅಧಿಕ ತೂಕದ ವಾಹನಗಳ ಸಂಚಾರವನ್ನು ತಡೆಗಟ್ಟಲು ಪ್ರಾದೇಶಿಕ ಸಾರಿಗೆ ಇಲಾಖೆ ಹಾಗೂ ಅರಕ್ಷಕ ಇಲಾಖೆಗಳು ಕ್ರಮ ಕೈಗೊಳ್ಳಬೇಕಿರುತ್ತದೆ.

732(548) ಶ್ರೀ ಗೋಪಾಲ್ ಪೂಜಾರಿ. ಕೆ (ಬೈಂದೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಅತಿವೃಷ್ಟಿಯಿಂದ ಬರಗಾಲ ಪೀಡಿತ ಪ್ರದೇಶಗಳಿಗೆ ಬಿಡುಗಡೆ ಮಾಡಿದ ಹಣವೆಷ್ಟು; ಜಿಲ್ಲಾವಾರು ವಿವರ ನೀಡುವುದು;

ಆ) ಉಡುಪಿ ಜಿಲ್ಲೆಗೆ ಬಿಡುಗಡೆ ಮಾಡಿದ ಹಣವೆಷ್ಟು;

ಇ) ರಾಜ್ಯದಲ್ಲಿ ಅತಿ ಹೆಚ್ಚು ಮಳೆಯಾಗುವ ಜಿಲ್ಲೆಗಳು ಯಾವುವು (ವಿವರ ನೀಡುವುದು)?